ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 3 ವಿಧಾನ ಪರಿಷತ್ತಿನ ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 8/1/2021

2

# ನನ್ನನ್ನು ಸಭಾಪತಿ ಮಾಡಲು ಒಲವು: ಬಸವರಾಜ ಹೊರಟ್ಟಿ

ಪ್ರ.ವಾ. 8-1-2021

ಹುಬ್ಬಳ್ಳಿ: 'ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ನನ್ನನ್ನು ಆಯ್ಕೆ ಮಾಡಲು ಮೂರೂ ಪಕ್ಷಗಳ ನಾಯಕರು ಒಲವು ತೋರುತ್ತಿದ್ದಾರೆ' ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಹೇಳಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು 'ಸಭಾಪತಿ ಸ್ಥಾನಕ್ಕೆ ಹಿಂದೆ ನನ್ನ ಹೆಸರು ಪ್ರಸ್ತಾಪವಾದಾಗ ಎಲ್ಲ ಪಕ್ಷಗಳ ನಾಯಕರು ಸಹಮತ ವ್ಯಕ್ತಪಡಿಸಿದ್ದರು. ಎಚ್.ಡಿ. ದೇವೇಗೌಡ ಅವರಿಗೂ ಒಲವಿದೆ ಎಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಜೆಡಿಎಸ್‌ಗೆ ಸಭಾಪತಿ ಸ್ಥಾನ ಕೊಡಬೇಕು ಎಂಬ ನಿಯಮವೇನೂ ಇಲ್ಲ. ಆದರೆ, ನಮ್ಮನ್ನು ಬಿಟ್ಟು ಸಭಾಪತಿಯನ್ನು ಆಯ್ಕೆ ಮಾಡಲು ಸಾಧ್ಯವಿಲ್ಲ' ಎಂದರು.



'ಪರಿಷತ್‌ನಲ್ಲಿ ಈಚೆಗೆ ನಡೆದ ಗಲಾಟೆ ಬಹಳಷ್ಟು ಚರ್ಚೆಗೆ ಕಾರಣವಾಗಿದೆ. ಆ ರೀತಿಯ ಘಟನೆ ಮರುಕಳಿಸದಂತೆ ಎಚ್ಚರಿಕೆ ವಹಿಸಲು ಅವಿರೋಧ ಆಯ್ಕೆ ಮಾಡಬೇಕು ಎಮ್ನುವ ಚರ್ಚೆಯೂ ನಡೆದಿದೆ' ಎಂದರು.

'ಕೊನೆಯ ಅವಕಾಶವೆಂದು ನಿಮ್ಮನ್ನು ಸಭಾಪತಿ ಮಾಡಲು ಚಿಂತನೆ ನಡೆದಿದೆಯೇ' ಎಂಬ ಮಾಧ್ಯಮದವರ ಪ್ರಶ್ನೆಗೆ 'ಕೊನೆಯ ಅವಕಾಶವೇನಲ್ಲ. ಮುಂದಿನ ಚುನಾವಣೆಯಲ್ಲಿಯೂ ಸ್ಪರ್ಧಿಸುತ್ತೇನೆ' ಎಂದು ಪ್ರತಿಕ್ರಿಯಿಸಿದರು. 'ರಾಜಕಾರಣ ಸಾಕಾಗಿದೆ' ಎಂದು ನೀವೇ ಹೇಳಿದ್ದೀರಲ್ಲ ಎಂದಾಗ, 'ಹೆರಿಗೆ ಸಮಯದಲ್ಲಿ ಹೆಣ್ಣುಮಕ್ಕಳು ಇದೊಂದೇ ಮಗು ಸಾಕು ಎಂದು ಹೇಳಿ ಮತ್ತೊಂದು ಹೆರಿಗೆಗೆ ಸಿದ್ಧರಾಗುತ್ತಾರಲ್ಲ. ರಾಜಕಾರಣವೂ ಹಾಗೆ' ಎಂದು ಸಮರ್ಥಿಸಿಕೊಂಡರು.